# ಕರ್ನಾಟಕ ವಿಧಾನ ಪರಿಷತ್ತು

**ಸದಸ್ಯರ ಹೆಸರು** : **ಶ್ರೀ ಸುನೀಲ್ ವಲ್ಯಾಪುರ್ (ವಿಧಾನ ಸಭೆಯಿಂದ ಚುನಾಯಿತರಾದವರು)**

**ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** : **554**

**ಉತ್ತರಿಸಬೇಕಾದ ದಿನಾಂಕ:** : **14.08.2025**

**ಉತ್ತರಿಸುವ ಸಚಿವರು** : **ಗೃಹ ಸಚಿವರು**

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಅಕ್ರಮವಾಗಿ ಬಂದು ನೆಲೆಸಿರುವ ವಿದೇಶಿ ಪ್ರಜೆಗಳನ್ನು ಗುರುತಿಸಲು ಸರ್ಕಾರದ ಬಳಿಯಿರುವ ವ್ಯವಸ್ಥೆಗಳೇನು; | ರಾಜ್ಯದಲ್ಲಿ ಅಕ್ರಮವಾಗಿ ಬಂದು ನೆಲೆಸಿರುವ ವಿದೇಶಿ ಪ್ರಜೆಗಳನ್ನು ಗುರುತಿಸಲು ಈ ಕೆಳಗಿನಂತೆ ಕ್ರಮ ವಹಿಸಲಾಗುತ್ತಿದೆ:-<br><br>1. ರಾಜ್ಯದಲ್ಲಿ ಅಕ್ರಮ ವಲಸಿಗರನ್ನು ಪತ್ತೆ ಹಚ್ಚಲು ಪೊಲೀಸ್ ಠಾಣಾ ಮಟ್ಟದಲ್ಲಿ ಗುಪ್ತಚರ ಸಿಬ್ಬಂದಿ ಹಾಗೂ ಕ್ರೈಂ ಸಿಬ್ಬಂದಿಗಳು ವಿದೇಶೀಯರ ಚಲನವಲನಗಳ ಮೇಲೆ ನಿಗಾ ವಹಿಸುವಂತೆ ಸೂಕ್ತ ತಿಳುವಳಿಕೆ ನೀಡಲಾಗಿರುತ್ತದೆ.<br><br>2. ರಾಜ್ಯದಲ್ಲಿ ಠಾಣಾ ಮಟ್ಟದಲ್ಲಿ ಚಿಂದಿ ಆಯುವ ಕೆಲಸ ಮಾಡುವ ವ್ಯಕ್ತಿಗಳ ಮೇಲೆ ಹಾಗೂ ಇವರು ನೆಲೆಸಿರುವ ಸ್ಥಳಗಳ ಬಳಿ ಹೆಚ್ಚಿನ ನಿಗಾವಹಿಸುವಂತೆ ಇವರ ಚಲನವಲನಗಳ ಮೇಲೆ ಸೂಕ್ತ ಗಮನಹರಿಸುವಂತೆ ಎಲ್ಲಾ ಘಟಕಾಧಿಕಾರಿಗಳಿಗೆ ಸೂಕ್ತ ತಿಳುವಳಿಕೆ ನೀಡಲಾಗಿರುತ್ತದೆ.<br><br>3. ರಾಜ್ಯದಲ್ಲಿ ಹೆಚ್ಚು ವಿದೇಶಿ ಪ್ರಜೆಗಳು ವಾಸಿಸುವ ಸ್ಥಳಗಳ ಬಳಿ ಸತತ ನಿಗಾವಹಿಸಲು ಮೀಸಲು ಪಡೆ ಹಾಗೂ ಸಿಬ್ಬಂದಿಗಳನ್ನು ನಿಯೋಜಿಸಿ ಕ್ರಮ ಜರುಗಿಸಲು ಎಲ್ಲಾ ಘಟಕಾಧಿಕಾರಿಗಳಿಗೆ ಸೂಚಿಸಲಾಗಿರುತ್ತದೆ.<br><br>4. ರಾಜ್ಯದಲ್ಲಿ ಅವಧಿ ಮೀರಿ ವಾಸವಾಗಿರುವ ಹಾಗೂ ಅಕ್ರಮವಾಗಿ ನೆಲೆಸಿರುವ ವಿದೇಶಿ ಪ್ರಜೆಗಳು ಪತ್ತೆಯಾದಲ್ಲಿ ಅಂತಹ ಆರೋಪಿಗಳನ್ನು ಅವರ ದೇಶದ ವಿದೇಶಿ ಮಂತ್ರಾಲಯದ ಮೂಲಕ ಆಯಾ ದೇಶಗಳಿಗೆ ಹಾಗೂ ವಿದೇಶಾಂಗ ವ್ಯವಹಾರಗಳ ಸಚಿವಾಲಯಕ್ಕೆ (Ministry of External Affairs) ಮಾಹಿತಿಯನ್ನು ನೀಡಲಾಗುತ್ತಿದೆ. |

| | | |
|---|---|---|
| | | 5. ರಾಜ್ಯದಲ್ಲಿ ನೆಲೆಸಿರುವ ವಿದೇಶಿ ಪ್ರಜೆಗಳ ವಿರುದ್ಧ ಪ್ರಕರಣ ದಾಖಲಿಸಿ ಮಾನ್ಯ ನ್ಯಾಯಾಲಯದಲ್ಲಿ ಇತ್ಯರ್ಥವಾಗುವವರೆಗೂ ಸಂಬಂಧಪಟ್ಟ ಇಲಾಖೆಯಿಂದ ನಿರ್ಗಮನ ಪರವಾನಗಿ (Exit Permit) ಯನ್ನು ಪಡೆಯುವವರೆಗೆ, ಇವರನ್ನು ಫಾರಿನ್ ಡಿಟೆಂನ್ಷನ್ ಸೆಂಟರ್‌ನಲ್ಲಿ (FDC) ಇರಿಸಿ, ಪ್ರಕರಣ ಇತ್ಯರ್ಥವಾದ ನಂತರ ವಿದೇಶಿ ಪ್ರಜೆಯ ಗಡಿಪಾರು ನಿಯಮವನ್ನು ಪಾಲಿಸಲಾಗುತ್ತಿದೆ.<br><br>6. ರಾಜ್ಯದಲ್ಲಿ ವಿದೇಶಿ ಪ್ರಜೆಗಳು ಅಕ್ರಮವಾಗಿ ನೆಲೆಸಲು ಸಹಕಾರ ನೀಡಿರುವ ಮತ್ತು ಶೈಕ್ಷಣಿಕ ಸಂಸ್ಥೆಗಳ ವಿರುದ್ಧವೂ ಸಹ ಸೂಕ್ತ ಕಾನೂನು ಕ್ರಮ ಜರುಗಿಸಲಾಗುತ್ತಿದೆ.<br><br>7. ವಿದೇಶಿಯರ ನೊಂದಣಿಯನ್ನು ಆನ್ ಲೈನ್ ಮುಖಾಂತರ (IVRFT) ನಲ್ಲಿ ಮಾಡಲಾಗುತ್ತಿದೆ. ಅಕ್ರಮವಾಗಿ ನೆಲೆಸಿರುವ ವಿದೇಶಿಯರು ಪತ್ತೆಯಾದಲ್ಲಿ ಸದರಿಯವರ ಮಾಹಿತಿಯನ್ನು FIP (Foreigner Identification Portal) ನಲ್ಲಿ ನಮೂದಿಸುವಂತೆ ಎಲ್ಲಾ ಘಟಕಾಧಿಕಾರಿಗಳಿಗೆ ಸೂಚಿಸಲಾಗಿರುತ್ತದೆ.<br><br>8. ರಾಜ್ಯದಲ್ಲಿ ವಿದೇಶಿ ಪ್ರಜೆಗಳು ಅಕ್ರಮವಾಗಿ ವಾಸಿಸಿರುವ ಪತ್ತೆಕಾರ್ಯದ ಸಲುವಾಗಿ ಜಿಲ್ಲಾ ಮತ್ತು ನಗರ ಘಟಕಗಳಲ್ಲಿ ಕೇಂದ್ರ ಗೃಹ ಮಂತ್ರಾಲಯ ಕಛೇರಿ ರವರ ಆದೇಶ ಸಂಖ್ಯೆ 25022/28/2020-F.I(parp.III) ದಿನಾಂಕ:02.05.2025ರಲ್ಲಿ ಸ್ಪೆಷಲ್ ಟಾಸ್ಕ್ ಫೋರ್ಸ್(Special Task Force) ತಂಡವನ್ನು ರಚಿಸಿದ್ದು ತಂಡದಲ್ಲಿ ಅಧಿಕಾರಿ ಮತ್ತು ಸಿಬ್ಬಂದಿಗಳನ್ನು ನೇಮಿಸಲಾಗಿರುತ್ತದೆ.<br><br>9. ಎಲ್ಲಾ ಘಟಕಗಳಲ್ಲಿ ವಿದೇಶಿಯರಿಗೆ ಸಂಬಂಧಿಸಿದಂತೆ DPM (District Police Module) ಮತ್ತು FIP (Foreigner Identification Portal) ತಂತ್ರಾಂಶವನ್ನು ಒದಗಿಸಿದ್ದು ಕಾರ್ಯನಿರ್ವಹಿಸುತ್ತಿದ್ದಾರೆ. |
| ಆ) | ಇವರು ಪ್ರವಾಸಿ ವೀಸಾ ಪಡೆದು ಭಾರತಕ್ಕೆ ಬಂದು ವೀಸಾ ಅವಧಿ ಮುಗಿದ ಮೇಲೂ ಅಕ್ರಮವಾಗಿ ದೇಶದಲ್ಲಿ ನೆಲೆಸಿ ಸಮಾಜಬಾಹಿರ ಕೃತ್ಯದಲ್ಲಿ | ರಾಜ್ಯದಲ್ಲಿ ಪ್ರವಾಸಿ ವೀಸಾ (tourist visa) ಪಡೆದು ಅವಧಿ ಮುಗಿದ ನಂತರವೂ ಅಕ್ರಮವಾಗಿ ದೇಶದಲ್ಲಿ ನೆಲೆಸಿ ಸಮಾಜ ಬಾಹಿರ ಕೃತ್ಯದಲ್ಲಿ ತೊಡಗಿರುವುದು ಕಂಡುಬಂದಲ್ಲಿ ಅಂತಹವರ ವಿರುದ್ಧ ಸೂಕ್ತ ಕಾನೂನು ರೀತಿಯ ಕ್ರಮ ಕೈಗೊಳ್ಳಲಾಗುವುದು ಹಾಗೂ ಠಾಣಾ ವ್ಯಾಪ್ತಿಗಳಲ್ಲಿ ಅಂತಹ ವಿದೇಶಿಯರ ಮೇಲೆ ನಿಗಾ ವಹಿಸಲಾಗುತ್ತಿದೆ. ಕಾನೂನು ಉಲ್ಲಂಘಿಸುವವರ ವಿರುದ್ಧ ಕಠಿಣ ಕ್ರಮ ಕೈಗೊಂಡು |

| | | |
|---|---|---|
| | ತೊಡಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ನ್ಯಾಯಾಂಗ ಬಂಧನಕ್ಕೆ ಒಳಪಡಿಸಲಾಗುವುದು. ರಾಜ್ಯದಲ್ಲಿ ಒಟ್ಟು 27 ಜನ ವಿದೇಶಿಯರು ಪ್ರವಾಸಿ ವೀಸಾ ಪಡೆದು ಭಾರತಕ್ಕೆ ಬಂದು ವೀಸಾ ಅವಧಿ ಮುಗಿದ ಮೇಲೂ ಅಕ್ರಮವಾಗಿ ನೆಲೆಸಿರುತ್ತಾರೆ.<br><br>ಇವರುಗಳು ಸಮಾಜ ಬಾಹಿರ ಕೃತ್ಯದಲ್ಲಿ ತೊಡಗಿರುವುದು ಕಂಡುಬಂದಲ್ಲಿ ಕಾನೂನು ರೀತ್ಯಾ ಕ್ರಮ ಜರುಗಿಸಲಾಗುವುದು ಹಾಗೂ ಸದರಿಯವರುಗಳ ಪತ್ತೆ ಕಾರ್ಯ ಪ್ರಗತಿಯಲ್ಲಿರುತ್ತದೆ. |
| ಇ | ಬಂದಿದ್ದಲ್ಲಿ ಇಂತಹ ಅಕ್ರಮ ವಲಸಿಗರು ತಾಂತ್ರಿಕ ನೈಪುಣ್ಯತೆ ಪಡೆದಿದ್ದು ಅಮಾಯಕ ಗ್ರಾಮೀಣ ಅನಕ್ಷರಸ್ಥ ಬಡಜನರ ಬ್ಯಾಂಕ್ ಖಾತೆಗಳಲ್ಲಿ ಹಣ ಲಪಟಾಯಿಸುತ್ತಿದ್ದು, ಇಂತಹ ಪ್ರಕರಣಗಳಲ್ಲಿ ಹಣ ಕಳೆದುಕೊಂಡವರಿಗಾಗಿ ಸರ್ಕಾರ ಕೈಗೊಂಡ ಕ್ರಮಗಳೇನು; (ಮಾಹಿತಿ ನೀಡುವುದು) | ಈ ಬಗ್ಗೆ ನಿರ್ದಿಷ್ಟ ದೂರುಗಳು ಬಂದಲ್ಲಿ ಸೂಕ್ತ ಕಾನೂನು ಕ್ರಮ ಕೈಗೊಳ್ಳುವಂತೆ ಎಲ್ಲಾ ಘಟಕಾಧಿಕಾರಿಗಳಿಗೆ ಸೂಚಿಸಲಾಗಿರುತ್ತದೆ. |
| ಈ) | ಇವರು ಅಕ್ರಮವಾಗಿ ಗಾಂಜಾ, ಅಫೀಮು, ಚರಸ್ ಮಾರಾಟ ದಂಧೆಯಲ್ಲಿ ತೊಡಗಿದ್ದು ಇದರಿಂದ ಸಮಾಜದ ಸ್ವಾಸ್ಥ್ಯ ಹಾಳಾಗುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಇಂತಹ ಅಕ್ರಮ ವಿದೇಶಿ ವಲಸಿಗರ ವಿರುದ್ಧ ಸರ್ಕಾರ ಯಾವ ಕ್ರಮ ಕೈಗೊಂಡಿದೆ? (ಕಳೆದ ಮೂರು ವರ್ಷದ ಮಾಹಿತಿ ನೀಡುವುದು) | ಕಳೆದ 3 ವರ್ಷಗಳಲ್ಲಿ ಅಕ್ರಮವಾಗಿ ಗಾಂಜಾ, ಅಫೀಮು, ಚರಸ್ ಮಾರಾಟ ದಂಧೆಯಲ್ಲಿ ತೊಡಗಿರುವ ಅಕ್ರಮ ವಲಸಿಗರ ವಿರುದ್ಧ ಯಾವುದೇ ಪ್ರಕರಣಗಳು ದಾಖಲಾಗಿರುವುದಿಲ್ಲ.<br><br>ಈ ಬಗ್ಗೆ, ಅಕ್ರಮ ವಿದೇಶಿ ವಲಸಿಗರು ಸದರಿ ದಂಧೆಯಲ್ಲಿ ತೊಡಗಿರುವುದು ಕಂಡುಬಂದಲ್ಲಿ ಅವರುಗಳ ವಿರುದ್ಧ ಸಂಬಂಧಪಟ್ಟ ಪೊಲೀಸ್ ಠಾಣೆಗಳಲ್ಲಿ ಪ್ರಕರಣಗಳನ್ನು ದಾಖಲು ಮಾಡಿ, ಮುಂದಿನ ಕ್ರಮ ಜರುಗಿಸಲಾಗುವುದು. |

**ಸಂಖ್ಯೆ: ಹೆಚ್‌ಡಿ 319 ಪಿಎಂಎಸ್ 2025**

**(ಡಾ: ಜಿ. ಪರಮೇಶ್ವರ)**
**ಗೃಹ ಸಚಿವರು**